## ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕಿಶೋರ್ ಕುಮಾರ್ ಪುತ್ತೂರ್ ರವರು ನಿಯಮ-330 ರ ಮೇರೆಗೆ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

**ವಿಷಯ:** ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರ ಪ್ರಯಾಣ ಭತ್ಯೆಯನ್ನು ಹೆಚ್ಚಿಸುವ ಮತ್ತು ಗ್ರಾಮೀಣ ಸ್ಥಳೀಯ ಸಂಸ್ಥೆಯ ಜನ ಪ್ರತಿನಿಧಿಗಳಿಗೆ ಮಾಸಿಕ ದೂರವಾಣಿ ಭತ್ಯೆ ಪಾವತಿಸಲು ಕ್ರಮ ವಹಿಸುವ ಕುರಿತು.

**ಉತ್ತರ:** ರಾಜ್ಯದಲ್ಲಿ ಪ್ರಸ್ತುತ 5950 ಗ್ರಾಮ ಪಂಚಾಯತಿಗಳಿದ್ದು, ಈ ಗ್ರಾಮ ಪಂಚಾಯತಿಗಳಲ್ಲಿ ಅಧ್ಯಕ್ಷರು 5882, ಉಪಾಧ್ಯಕ್ಷರು 5881 ಮತ್ತು ಸದಸ್ಯರು 82,049 ಚುನಾಯಿತ ಪ್ರತಿನಿಧಿಗಳಿರುತ್ತಾರೆ.

ಗ್ರಾಮ ಪಂಚಾಯತಿಗಳ ಚುನಾಯಿತ ಅಧ್ಯಕ್ಷ, ಉಪಾಧ್ಯಕ್ಷ ಹಾಗೂ ಸದಸ್ಯರಿಗೆ ಮಾಸಿಕ ಗೌರವ ಧನವನ್ನು ಸರ್ಕಾರದಿಂದ ಬಿಡುಗಡೆ ಮಾಡಲಾಗುತ್ತಿದ್ದು, ಈ ಗೌರವ ಧನದ ಮೊತ್ತವನ್ನು ಸರ್ಕಾರವು ಆಗಿಂದಾಗ್ಗೆ ಪರಿಷ್ಕರಿಸುತ್ತಿದೆ. ಈ ಹಿಂದೆ ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 116 ಜಿಪಸ 2017, ದಿನಾಂಕ:03.05.2017ರಲ್ಲಿ ರಾಜ್ಯದ ಗ್ರಾಮ ಪಂಚಾಯತಿಯ ಅಧ್ಯಕ್ಷರಿಗೆ ರೂ.3000/-, ಉಪಾಧ್ಯಕ್ಷರಿಗೆ ರೂ.2000/- ಮತ್ತು ಸದಸ್ಯರಿಗೆ ರೂ.1000/- ಗಳನ್ನು ನಿಗಧಿಪಡಿಸಲಾಗಿತ್ತು. ತದನಂತರ ಸರ್ಕಾರ ಆದೇಶ ಸಂಖ್ಯೆ:ಗ್ರಾಅಪಂರಾ 126 ಜಿಪಸ 2022, ದಿನಾಂಕ:18.12.2022ರಲ್ಲಿ ಸದರಿ ಗೌರವಧನದ ಮೊತ್ತವನ್ನು ಪರಿಷ್ಕರಿಸಲಾಗಿರುತ್ತದೆ. ಈ ಆದೇಶದನ್ವಯ ಮಾಸಿಕವಾಗಿ ಗ್ರಾಮ ಪಂಚಾಯತಿ ಅಧ್ಯಕ್ಷರಿಗೆ ರೂ.6000/-, ಉಪಾಧ್ಯಕ್ಷರಿಗೆ ರೂ.4000/- ಮತ್ತು ಸದಸ್ಯರಿಗೆ ರೂ.2000/- ಗೌರವಧನವನ್ನು ಡಿಸೆಂಬರ್ 2022 ರಿಂದ ಅನ್ವಯವಾಗುವಂತೆ ಪಾವತಿಸಲು ಆದೇಶಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 126 ಜಿಪಸ 2022, ದಿನಾಂಕ: 23.01.2023 ರನ್ವಯ ಗ್ರಾಮ ಪಂಚಾಯತಿಯ ಚುನಾಯಿತ ಪ್ರತಿನಿಧಿಗೆ ರೂ.300/- ಉಪವೇಶನ ಶುಲ್ಕವನ್ನು ಪಾವತಿಸಲಾಗುತ್ತಿದೆ.

ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತ್ ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಸದಸ್ಯರುಗಳ ಪ್ರಯಾಣ ಭತ್ಯೆ ಮತ್ತು ದಿನಭತ್ಯೆ) ನಿಯಮಗಳು, 1994 ರನ್ವಯ ಗ್ರಾಮ ಪಂಚಾಯತಿಗಳ ಅಧ್ಯಕ್ಷ, ಉಪಾಧ್ಯಕ್ಷ ಹಾಗೂ ಸದಸ್ಯರುಗಳು ಅವನ ಪ್ರಕಾರ್ಯಗಳನ್ನು ನೆರವೇರಿಸುವುದಕ್ಕಾಗಿ, ಗ್ರಾಮ ಪಂಚಾಯತಿ ಪರಿಮಿತಿ ಆಚೆ ಅವನು ಮಾಡಿದ ಪ್ರಯಾಣಕ್ಕಾಗಿ ಇತ್ತೀಚಿನ ಪ್ರಯಾಣ ದರದನ್ವಯ ಪ್ರಯಾಣ ಭತ್ಯೆ ಮತ್ತು ದಿನಭತ್ಯೆಯನ್ನು ಪಾವತಿಸಲಾಗುತ್ತಿದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್(ಗ್ರಾಮ ಪಂಚಾಯಿತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು, 2006ರ ನಿಯಮ, 65ರಂತೆ ಗ್ರಾಮ ಪಂಚಾಯತ್ ಕಛೇರಿಯಲ್ಲಿ ಮಾತ್ರ ದೂರವಾಣಿ ಸಂಪರ್ಕಕ್ಕೆ ಮಂಜೂರಾತಿ ನೀಡಲು ಗ್ರಾಮ ಪಂಚಾಯಿತಿಗೆ ಅಧಿಕಾರವಿದೆ. ಅದರಂತೆ, ದೂರವಾಣಿ ವೆಚ್ಚ ಮಾಸಿಕ ರೂ.1,000/-ಗಳನ್ನು ಪಾವತಿಸಲು ಅವಕಾಶವಿದೆ.

ಗ್ರಾಮ ಪಂಚಾಯತಿಯ ಜನಪ್ರತಿನಿಧಿಗಳಿಗೆ ಮಾಸಿಕ ದೂರವಾಣಿ ಭತ್ಯೆ ಪಾವತಿಸಲು ಅವಕಾಶವಿರುವುದಿಲ್ಲ.

**ಸಂಖ್ಯೆ: ಗ್ರಾಅಪ 617 ಗ್ರಾಪಂಅ 2024**

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.